ಕರ್ನಾಟಕ ಸರ್ಕಾರ

(ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ)

# ಜಿಲ್ಲಾಧಿಕಾರಿಗಳ ಕಾರ್ಯಾಲಯ ಬಾಗಲಕೋಟ ಜಿಲ್ಲೆ ಬಾಗಲಕೋಟ

ಸಂ: ಜಿಹಿಂವಕಬಾ/ಸಿಬ್ಬಂದಿ/ಸಿಆರ್- /2016-17 ದಿನಾಂಕ:19-10-2016

## ಅಧಿಸೂಚನೆ

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿ ನಿಲಯಗಳಲ್ಲಿ ಖಾಲಿ ಇರುವ ಅಡುಗೆಯವರು ಹಾಗೂ ಅಡುಗೆ ಸಹಾಯಕರ ಹುದ್ದೆಗಳಿಗೆ ಸರ್ಕಾರದ ಆದೇಶ ಸಂಖ್ಯೆ: ಹಿಂವಕ 336 ಬಿಇಟಿ 2015 ದಿನಾಂಕ: 05.11.2015 ಹಾಗೂ ಸರ್ಕಾರದ ಆದೇಶ ಸಂಖ್ಯೆ: ಹಿಂವಕ 90 ಬಿಇಟಿ 2016(ಭಾಗ-2) ,ದಿನಾಂಕ: 29/09/2016 ರನ್ವಯ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ON-LINE ಮೂಲಕ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ.

**ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ : 25.10.2016.**
**ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ : 19.11.2016.**
**ಅರ್ಜಿ ಶುಲ್ಕವನ್ನು ಪಾವತಿಸಲು ಕೊನೆಯ ದಿನಾಂಕ : 21.11.2016.**

**ಅರ್ಜಿ ಶುಲ್ಕ :**

| ಕ್ರ. ಸಂ | ಜಾತಿ/ಪ್ರವರ್ಗ | ಅಡುಗೆಯವರು | ಅಡುಗೆ ಸಹಾಯಕರು |
|---|---|---|---|
| 1. | ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ಪ್ರವರ್ಗ-I ಅಭ್ಯರ್ಥಿಗಳಿಗೆ | ರೂ.150/- | ರೂ.100/- |
| 2. | ಪ್ರವರ್ಗ-2ಎ, 2ಬಿ, 3ಎ, 3ಬಿ ಹಾಗೂ ಸಾಮಾನ್ಯ ಅರ್ಹತೆ ಅಭ್ಯರ್ಥಿಗಳಿಗೆ | ರೂ.250/- | ರೂ.200/- |
| ಅಂಗವಿಕಲ ಅಭ್ಯರ್ಥಿಗಳಿಗೆ ಶುಲ್ಕ ವಿನಾಯಿತಿ ಇದೆ. (ಶೇ 40 ಕ್ಕಿಂತ ಹೆಚ್ಚು ಅಂಗವಿಕಲತೆ ಹೊಂದಿರುವವರು ಮತ್ತು ಅದಕ್ಕೆ ಸಂಬಂಧಿಸಿದಂತೆ ಸಕ್ಷಮ ಪ್ರಾಧಿಕಾರಿಯಿಂದ ಪ್ರಮಾಣ ಪತ್ರ ಹೊಂದಿರುವವರು). | | | |

ಅರ್ಜಿ ಶುಲ್ಕವನ್ನು ಅಂಚೆ ಕಛೇರಿಯ ಕೆಲಸದ ವೇಳೆಯೊಳಗೆ ಕರ್ನಾಟಕದ ಯಾವುದೇ ಎಲೆಕ್ಟ್ರಾನಿಕ್ ಅಂಚೆ ಕಛೇರಿಗಳಲ್ಲಿ(e-payment post offices only) ಪಾವತಿ ಮಾಡಬಹುದು. ಇದನ್ನು ಹೊರತುಪಡಿಸಿ ಡಿ.ಡಿ. ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ.

**ಅರ್ಜಿ ಸಲ್ಲಿಸುವ ವಿಧಾನ:**

1. On-line ಮುಖಾಂತರ http://bagalkot.nic.in ವೆಬ್‌ಸೈಟ್‌ನಲ್ಲಿ ಅರ್ಜಿಯನ್ನು ದಿ:25-10-2016 ರಿಂದ ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸತಕ್ಕದ್ದು.
2. On-line ಹೊರತುಪಡಿಸಿ ಯಾವುದೇ ವಿಧದಲ್ಲಿ ಅರ್ಜಿಯನ್ನು ಸಲ್ಲಿಸಲು ಅವಕಾಶವಿರುವುದಿಲ್ಲ. On-line ಅರ್ಜಿಯ ಪ್ರತಿಯನ್ನು ಅಂಚೆ ಮುಖಾಂತರವಾಗಲೀ, ಮುದ್ದಾಂ ಆಗಿ ಆಗಲೀ ಅಥವಾ ಇನ್ನಿತರ ವಿಧಾನಗಳಲ್ಲಿ ಇಲಾಖೆಗೆ ಸಲ್ಲಿಸಬೇಕಾದ ಅವಶ್ಯಕತೆ ಇರುವುದಿಲ್ಲ.
3. ಒಬ್ಬ ಅಭ್ಯರ್ಥಿಯು ಒಂದು ಅಥವಾ ಎರಡು ಹುದ್ದೆಗಳಿಗೆ ಪ್ರತ್ಯೇಕ ಅರ್ಜಿ ಸಲ್ಲಿಸಬಹುದು.
4. ಅರ್ಜಿಯ ಜೊತೆಗೆ ಯಾವುದೇ ಮೂಲ/ನಕಲು/ಜೆರಾಕ್ಸ್ ದಾಖಲಾತಿಗಳು, ಪ್ರಮಾಣ ಪತ್ರಗಳು, ಇತ್ಯಾದಿಗಳನ್ನು ಸಲ್ಲಿಸಬೇಕಾಗಿರುವುದಿಲ್ಲ.
5. ಅಭ್ಯರ್ಥಿಯು ಅರ್ಜಿಯನ್ನು ಸಲ್ಲಿಸುವ ಮೊದಲು, ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದ ಒಳಗೆ ಸಂಬಂಧಿಸಿದ ಪ್ರಾಧಿಕಾರಗಳಿಂದ ಅವಶ್ಯವಿರುವ ಎಲ್ಲಾ ಮೂಲ ದಾಖಲೆ/ಪ್ರಮಾಣ ಪತ್ರಗಳನ್ನು ಪಡೆದಿಟ್ಟುಕೊಂಡು, ಸದರಿ ಮೂಲ ದಾಖಲೆ, ಪ್ರಮಾಣ ಪತ್ರಗಳಲ್ಲಿರುವ ಮಾಹಿತಿಯನ್ನು ಸರಿಯಾಗಿ, ಸ್ಪಷ್ಟವಾಗಿ ಮತ್ತು ಸಮರ್ಪಕವಾಗಿ ಆನ್‌ಲೈನ್ ಅರ್ಜಿಯಲ್ಲಿ ಭರ್ತಿ ಮಾಡಿ ಸಲ್ಲಿಸತಕ್ಕದ್ದು.
6. ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿದ ಆನ್‌ಲೈನ್ ಅರ್ಜಿಯ ಒಂದು ಜೆರಾಕ್ಸ್ ಪ್ರತಿಯನ್ನು ಹಾಗೂ ಶುಲ್ಕ ಪಾವತಿಸಿದ ಬಗ್ಗೆ ರಶೀತಿಯನ್ನು ತೆಗೆದು ತಮ್ಮ ಬಳಿ ಇಟ್ಟುಕೊಳ್ಳತಕ್ಕದ್ದು. ಇದನ್ನು ಇಲಾಖೆಯು ಆಪೇಕ್ಷಿಸಿದಾಗ ಹಾಜರುಪಡಿಸತಕ್ಕದ್ದು.
7. ಹೆಚ್ಚಿನ ಮಾಹಿತಿಯನ್ನು http://bagalkot.nic.in ನಲ್ಲಿ ಪಡೆಯಬಹುದು. ಹಾಗೂ ಈ ದೂರವಾಣಿ ಸಂಖ್ಯೆ:08354-236419ಗೆ ಕರೆ ಮಾಡಬಹುದು.

19/x

**ಜಿಲ್ಲಾಧಿಕಾರಿಗಳು ಮತ್ತು ಅಧ್ಯಕ್ಷರು**
**ಜಿಲ್ಲಾಮಟ್ಟದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ**
**ವಿದ್ಯಾರ್ಥಿ ನಿಲಯಗಳಲ್ಲಿ ಖಾಲಿ ಇರುವ**
**ಅಡುಗೆಯವರು/ಅಡುಗೆ ಸಹಾಯಕರ ಹುದ್ದೆಗಳ**
**ನೇರ ನೇಮಕಾತಿ ಸಮಿತಿ**
**ಬಾಗಲಕೋಟ ಜಿಲ್ಲೆ**